ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 25–09–2017

<u>ಪತ್ರಿಕಾ ಆಮಂತ್ರಣ</u>

1. ಮಾಧ್ಯಮ ಪ್ರತಿನಿಧಿಗಳಿಗೆ ಮಾತೃಪೂರ್ಣ ಯೋಜನೆಯ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ:

**Department of Women & Child Welfare, Karnataka cordially invites you for**

# <u>Media orientation on Mathrupoorna Yojane (One Full Meal Scheme)</u>

<u>Welcome & Introduction to the Press Conference</u>

**Ms. Deepa Cholan, IAS**

Director, Department of Women & Child Welfare, Karnataka

<u>Mathrupoorna: Introduction to the Scheme & Services</u>

**Ms. Uma Mahadevan, IAS**

Principal Secretary, Women & Child Development, Karnataka

<u>Maternal Nutrition: Importance</u>

**Dr. Khyati Tiwari,**

Nutrition Specialist, UNICEF, Hyderabad

Convergence of Health services by Health dept., Govt. Of Karnataka

## Particulars

**Time: 11:30 A.M.**

**Date: 26th September 2017**

**Venue: Hotel Capital, Bengaluru, Karnataka**

Followed by lunch

**Media contact: 9036259062 Mahesh / 9845144299 Laxminarayan, ORION PR**

2. ಮೀನುಗಾರಿಕೆ ಮತ್ತು ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರಿಂದ ಇಲಾಖಾ ಕಾರ್ಯಕ್ರಮಗಳ ಕುರಿತಂತೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ಕಾರ್ಯಕ್ರಮ:

   ಪ್ರಮೋದ್ ಮಧ್ವರಾಜ್,
   ಮೀನುಗಾರಿಕೆ, ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು

   ದಿನಾಂಕ: 26–09–2017, ಮಂಗಳವಾರ ಸಮಯ: ಮಧ್ಯಾಹ್ನ 12.30 ಗಂಟೆಗೆ
   ಸ್ಥಳ: ಹೋಟೆಲ್ ಲಲಿತ್ ಅಶೋಕ್, ಕುಮಾರಕೃಪಾ ರಸ್ತೆ, ಬೆಂಗಳೂರು..

ಸಂಖ್ಯೆ 122/242

**ಪತ್ರಿಕಾ ಪ್ರಕಟಣೆ**

# ಶಿಕ್ಷಕರ ಮಕ್ಕಳಿಗೆ ಪ್ರತಿಭಾವಂತ ವಿದ್ಯಾರ್ಥಿ ವೇತನ – ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 25 ( ಕರ್ನಾಟಕ ವಾರ್ತೆ) :

2017–18 ನೇ ಸಾಲಿಗೆ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿಯ ವತಿಯಿಂದ ಜಿಲ್ಲಾ/ವಿಶ್ವವಿದ್ಯಾಲಯ ಮಟ್ಟದಲ್ಲಿ ಅತಿ ಹೆಚ್ಚು ಅಂಕ ಪಡೆದ ಶಿಕ್ಷಕರುಗಳ/ನಿವೃತ್ತ ಶಿಕ್ಷಕರ ಮಕ್ಕಳಿಗೆ " ಪ್ರತಿಭಾವಂತ ವಿದ್ಯಾರ್ಥಿ ವೇತನ" ವನ್ನು ಮಂಜೂರು ಮಾಡುವ ಸಲುವಾಗಿ ಅರ್ಜಿ ಆಹ್ವಾನಿಸಲಾಗಿದೆ.

2016–17 ನೇ ಮಾರ್ಚ್/ಏಪ್ರಿಲ್ 2017 ರಲ್ಲಿ ನಡೆದ ಎಸ್.ಎಸ್.ಎಲ್.ಸಿ / ದ್ವಿತೀಯ ಪಿ.ಯು.ಸಿ. ಹಾಗೂ ಪದವಿ ಅಂತಿಮ ವರ್ಷ ( ಬಿಎ/ಬಿ.ಎಸ್‌ಸಿ/ಬಿಕಾಂ/ಬಿ.ಇಡಿ/ಬಿಸಿಎ/ಬಿಬಿಎಂ/ಬಿ.ಹೆಚ್‌ಎಂ/ಎಲ್‌ಎಲ್‌ಬಿ ಅಂತಿಮ ಪೂರ್ವ (ಬಿಎ 6ನೇ ಸೆಮಿಸ್ಟರ್/ಎಂಬಿಬಿಸ್ ಅಂತಿಮ 2ನೇ ಫೇಸ್) ಪ್ರಥಮ ವರ್ಷದ ಸ್ನಾತಕೋತ್ತರ ಪರೀಕ್ಷೆ (1ನೇ ಮತ್ತು 2ನೇ ಸಮಿಸ್ಟರ್ ಎಂಎ/ಎಂಎಸ್ಸಿ/ಎಂಕಾಂ/ಎಂಎಡ್) ಪರೀಕ್ಷೆಗಳಲ್ಲಿ ಕನಿಷ್ಠ ಶೇ 60 ಅಂಕ ಪಡೆದ ವಿದ್ಯಾರ್ಥಿಗಳು ನಿಗದಿ ಅರ್ಜಿಗಳನ್ನು ದೃಢೀಕರಿಸಿದ ಅಂಕ ಪಟ್ಟಿಯೊಂದಿಗೆ ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ/ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ ಮತ್ತು ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು – 02 ಇಲ್ಲಿಗೆ ಸಲ್ಲಿಸಬಹುದಾಗಿದೆ. ಅರ್ಜಿಗಳನ್ನು ಪರಿಶೀಲಿಸಿ ಮೆರಿಟ್ ಆಧಾರದ ಮೇಲೆ ವಿದ್ಯಾರ್ಥಿ ವೇತನ ಬಿಡುಗಡೆ ಮಾಡಲಾಗುವುದು.

ಅರ್ಜಿ ನಮೂನೆಯನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ್ಜಾಲದಿಂದ (www.schooleducation.kar.nic.in) ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ 31.10.2017. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

*****

ಜೆಡಿ:ಜಿಪಿಆರ್

ಸಂಖ್ಯೆ 123/243

# ವಿಜ್ಞಾನಿ ಎನರಿಕೋ ಫರ್ಮಿ ಜನ್ಮ ದಿನಾಚರಣೆ

ಬೆಂಗಳೂರು, ಸೆಪ್ಟೆಂಬರ್ 25 ( ಕರ್ನಾಟಕ ವಾರ್ತೆ) :

ಜವಹರ್‌ಲಾಲ್ ನೆಹರು ತಾರಾಲಯದಲ್ಲಿ ಸೆಪ್ಟಂಬರ್ 27 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ ಈ ತಿಂಗಳ ಕಾರ್ಯಕ್ರಮವಾಗಿ ವಿಜ್ಞಾನಿ ಎನರಿಕೋ ಫರ್ಮಿ ಅವರ ಜನ್ಮ ದಿನಾಚರಣೆಯನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮದಲ್ಲಿ 40 ಶಿಕ್ಷಕರಿಗೆ ಪಾಲ್ಗೊಳ್ಳಲು ಅವಕಾಶವಿದ್ದು, ಮೊದಲು ನೋಂದಾಯಿಸಿದವರಿಗೆ ಮೊದಲ ಆದ್ಯತೆಯನ್ನು ನೀಡಲಾಗುವುದು. ಆಸಕ್ತ ಶಿಕ್ಷಕರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು. ತಾರಾಲಯದ ಇಮೇಲ್ info@taralaya.org. ವೀಕ್ಷಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜವಹರ್‌ಲಾಲ್ ನೆಹರು ತಾರಾಲಯದ ದೂರವಾಣಿ ಸಂಖ್ಯೆ 22379725/22203234 ಮೂಲಕ ಸಂಪರ್ಕಿಸಬಹುದು ಅಥವಾ ವೆಬ್‌ಸೈಟ್ http://www.taralaya.org/announcements.php. ವೀಕ್ಷಿಸಬಹುದಾಗಿದೆ.

*****

ಜೆಡಿ:ಜಿಪಿಆರ್

ಸಂಖ್ಯೆ 124/244

## ಪರಿಷ್ಕೃತ ಕೀ ಉತ್ತರ ಅಭ್ಯರ್ಥಿಗಳ ಮಾಹಿತಿಗಾಗಿ ವೆಬ್‌ಸೈಟ್‌ನಲ್ಲಿ ಪ್ರಕಟ

ಬೆಂಗಳೂರು, ಸೆಪ್ಟೆಂಬರ್ 25 ( ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಅಯೋಗವು ಆಯುಷ್ ಇಲಾಖೆಯ ಸರ್ಕಾರಿ ಆಯುಷ್ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿನ ಆಯುರ್ವೇಧ ಪ್ರಾಧ್ಯಾಪಕರು – ಕ್ರಿಯಾ ಶರೀರ, ಶಾಲಾಕ್ಯ ತಂತ್ರ, ರಸಶಾಸ್ತ್ರ ಮತ್ತು ಭೈಷಜ್ಯಕಲ್ಪನಾ, ರೋಗ ನಿಧಾನ ಪ್ರಸೂತಿ ತಂತ್ರ ಮತ್ತು ಸ್ತ್ರೀರೋಗ, ಕೌಮಾರಭೃತ್ಯ/ಬಾಲರೋಗ, ಶಲ್ಯತಂತ್ರ ಹಾಗೂ ಆಯುರ್ವೇದ ಸಹ ಪ್ರಾಧ್ಯಾಪಕರು – ಕ್ರಿಯಾ ಶರೀರ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಜೂನ್ 9, 2017 ರಂದು ಪ್ರಕಟಿಸಿದ ಕೀ ಉತ್ತರಗಳಿಗೆ ನಿಗದಿತ ಅವಧಿಯೊಳಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರುಗಳಿಂದ ಪರಿಶೀಲಿಸಿ ಪರಿಷ್ಕೃತ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.nic.in/key answers" ರಲ್ಲಿ ಪ್ರಕಟಿಸಿದೆ. ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

*****

ಜೆಡಿ:ಜಿಪಿಆರ್

ಸಂಖ್ಯೆ 125/245

# ಶಿಷ್ಯವೇತನ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ – ಅವಧಿ ವಿಸ್ತರಣೆ

ಬೆಂಗಳೂರು, ಸೆಪ್ಟೆಂಬರ್ 25 ( ಕರ್ನಾಟಕ ವಾರ್ತೆ) :

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ 2017–18 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ –"ಊಟ ಮತ್ತು ವಸತಿ ಸಹಾಯ ಯೋಜನೆ" ಮತ್ತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.

ಸ್ನಾತಕೋತ್ತರ ಕೋರ್ಸ್‌ಗಳಾದ ಎಂಬಿಎ, ಎಂಸಿಎ, ಎಂಟೆಕ್ ಮುಂತಾದ ತಾಂತ್ರಿಕ ಕೋರ್ಸ್‌ಗಳ ದಾಖಲಾತಿ ಪ್ರಕ್ರಿಯೆ ಕಾರ್ಯ ಇನ್ನೂ ಪೂರ್ಣಗೊಳ್ಳದೇ ಇರುವುದರಿಂದ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ಸೆಪ್ಟೆಂಬರ್ 30 ರವರೆಗೆ ವಿಸ್ತರಿಸಲಾಗಿದೆ.

ಅರ್ಜಿಯನ್ನು ಆನ್‌ಲೈನ್ ಮೂಲಕ kareepass.cgg.gov.in ಹಾಗೂ www.backwardclasses.kar.nic.in ನಲ್ಲಿ ಸಲ್ಲಿಸಬಹುದು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30.9.2017.

ವೆಬ್‌ಸೈಟ್ www.backwardclasses.kar.nic.in ನಲ್ಲಿ ನೋಡಬಹುದು. ದೂರವಾಣಿ ಸಂಖ್ಯೆ 080–65970005, 080–65970006 ಮೂಲಕ ಸಂಪರ್ಕಿಸಬಹುದಾಗಿದೆ.

*****

ಜೆಡಿ:ಜಿಪಿಆರ್